# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 696 |
| ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ನೀರಾವರಿ ಪಂಪ್ ಸೆಟ್ ಗಳನ್ನು ಸೌರಶಕ್ತಿ ಚಾಲಿತ ಪಂಪ್ ಸೆಟ್‌ಗಳನ್ನಾಗಿ ಪರಿವರ್ತಿಸುವ ಯೋಜನೆಯನ್ನು ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಈ ಯೋಜನೆಯ ಸಂಪೂರ್ಣ ವಿವರಗಳನ್ನು ನೀಡುವುದು; | ನೀರಾವರಿ ಪಂಪ್ ಸೆಟ್‌ಗಳಿಗೆ Stand-alone/off grid ಸೋಲಾರ್ ಪಂಪ್ ಸೆಟ್‌ಗಳನ್ನು ಒದಗಿಸುವ ಮೂಲಕ ನೀರಾವರಿ ಪಂಪ್ ಸೆಟ್‌ಗಳನ್ನು ಬೆಂಬಲಿಸುವುದು ಮತ್ತು ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ಪದ್ಧತಿಯನ್ನು ಬದಲಿಸಿ ಹೊಸ ಪದ್ಧತಿಯನ್ನು ಜಾರಿಗೆ ತರಲು ಸರ್ಕಾರಿ ಆದೇಶ ಸಂಖ್ಯೆ ಎನರ್ಜಿ/ವಿಎಸ್‌ಸಿ/214/2023, ದಿನಾಂಕ: 07.10.2023ನ್ನು ಹೊರಡಿಸಲಾಗಿರುತ್ತದೆ.<br>ಈಗಾಗಲೇ ನೊಂದಾವಣೆಗೊಂಡು ಮೂಲ ಸೌಕರ್ಯ ರಚನೆಗೆ ಕಾಯುತ್ತಿರುವ (ಬಾಕಿಯಿರುವ) ಹಾಗೂ ಹೊಸದಾಗಿ ನೋಂದಣಿಗೊಳ್ಳುವ ಪಂಪ್ ಸೆಟ್ ಗಳು, ವಿದ್ಯುತ್ ಜಾಲದಿಂದ 500 ಮೀಟರ್ ಪರಿಮಿತಿಯಿಂದಾಚೆ ಇದ್ದಲ್ಲಿ Stand alone /off-grid ಸೋಲಾರ್ ಪಂಪ್ ಅಳವಡಿಸಲು ಆದೇಶಿಸಿದೆ. |
| (ಆ) | ಈ ಯೋಜನೆಯಡಿ ಸೋಲಾರ್ ಘಟಕಗಳನ್ನು ಎಲ್ಲಿ ಸ್ಥಾಪಿಸಲಾಗುವುದು; ಮತ್ತು ಈ ಯೋಜನೆಗೆ ಸರ್ಕಾರದಿಂದ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗುವುದು ಹಾಗೂ ಕೇಂದ್ರ ಸರ್ಕಾರದಿಂದ ಎಷ್ಟು ಅನುದಾನ ಪಡೆಯಲಾಗಿದೆ; ಪಡೆದಿದ್ದಲ್ಲಿ, ಈವರೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು, | ಸದರಿ ಯೋಜನೆಯಡಿ ರೈತರ ಜಮೀನಿನ ಕೊಳವೆಬಾವಿಗಳಿಗೆ ಜಾಲಮುಕ್ತ ಸೌರ ಪಂಪ್‌ಸೆಟ್ ಗಳನ್ನು ಅಳವಡಿಸಲಾಗುವುದು.<br>ಸೌರ ಪಂಪ್ ಸೆಟ್‌ಗಳನ್ನು ಉತ್ತೇಜಿಸಲು ಕೇಂದ್ರ ಸರ್ಕಾರದಿಂದ ಶೇ.30ರಷ್ಟು ರಾಜ್ಯ ಸರ್ಕಾರದಿಂದ ಹಾಲಿ ಇರುವ ಶೇ.30 ರಷ್ಟು ಸಹಾಯಧನವನ್ನು ಶೇ 50 ಕ್ಕೆ ಹೆಚ್ಚಿಸಲಾಗಿರುತ್ತದೆ. ಈಗಾಗಲೇ ಅನುಷ್ಠಾನಗೊಳಿಸಿರುವ 870 ಸೌರ ಪಂಪ್‌ಸೆಟ್‌ಗಳಿಗೆ ಒಟ್ಟು ರೂ.3.60 ಕೋಟಿ ಬಿಡುಗಡೆಯಾಗಿದೆ. |

| | | |
|---|---|---|
| (ಇ) | ಸದರಿ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರದಿಂದ ಟೆಂಡರ್ ಕರೆಯಲಾಗಿದೆಯೇ; ಟೆಂಡರ್ ಕರೆದಿದ್ದಲ್ಲಿ, ಟೆಂಡರ್ ಪ್ರಕ್ರಿಯೆಯ ಸಂಪೂರ್ಣ ವಿವರ ನೀಡುವುದು ಹಾಗೂ ಈ ಯೋಜನೆಯಡಿ ಪ್ರತಿ ಯೂನಿಟ್ ವಿದ್ಯುತ್ ಉತ್ಪಾದನೆಗೆ ಎಷ್ಟು ಹಣ ಖರ್ಚಾಗಲಿದೆ; | ಸದರಿ ಯೋಜನೆಗೆ ಸಂಬಂಧಿಸಿದ ಟೆಂಡರ್ ದಾಸ್ತಾವೇಜನ್ನು ಸಿದ್ಧಪಡಿಸಿದ್ದು, ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯ ಪರಿಶೀಲನೆಗಾಗಿ ಸಲ್ಲಿಸಿದೆ. ತದ ನಂತರ ಟೆಂಡರ್ ಪ್ರಕ್ರಿಯೆ ಪ್ರಕ್ರಿಯೆ ಚಾಲನೆಗೊಳ್ಳುವುದು.<br>ಸದರಿ ಯೋಜನೆಯಡಿ ಜಾಲಮುಕ್ತ ಸೌರ ಪಂಪ್ ಸೆಟ್ ಗಳನ್ನು ಅಳವಡಿಸುವುದರಿಂದ ಪ್ರತಿ ಪಂಪ್ ಸೆಟ್ ಘಟಕದ ದರವನ್ನು ಅನುಷ್ಠಾನಗೊಳಿಸಿದ ಏಜೆನ್ಸಿಗಳಿಗೆ ನೀಡಲಾಗುವುದು. |
| (ಈ) | ಈ ಯೋಜನೆ ಜಾರಿಗೊಳಿಸಲು ರಾಜ್ಯದಲ್ಲಿ ರೈತರಿಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಖರ್ಚಾಗಿರುವ ಮೊತ್ತದ ವಿವರ ನೀಡುವುದು) | ಸೌರ ಪಂಪ್ ಸೆಟ್ ಅಳವಡಿಕೆಯಿಂದ ಆಗುವ ಉಪಯೋಗಗಳು ಮತ್ತು ವಿದ್ಯುತ್ ಉಳಿತಾಯದ ಬಗ್ಗೆ ತಿಳುವಳಿಕೆ ನೀಡಲು ಇಂಧನ ಇಲಾಖೆಯಿಂದ ಕೃಷಿ, ತೋಟಗಾರಿಕೆ, ರೇಷ್ಮೆ, ಸಮಾಜ ಕಲ್ಯಾಣ ಮತ್ತು ಇನ್ನಿತರೆ ಇಲಾಖೆಗಳ ಸಮನ್ವಯದೊಂದಿಗೆ GKVK ಆವರಣದಲ್ಲಿ ಮೇಳವನ್ನು ಡಿಸೆಂಬರ್ ಅಂತ್ಯಕ್ಕೆ ಆಯೋಜಿಸಲಾಗುವುದು. ಇಂಧನ ಇಲಾಖೆಯ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳ ಎಲ್ಲಾ ಹಂತದ ನೌಕರರು/ ಅಧಿಕಾರಿಗಳಿಗೆ ತರಬೇತಿಯನ್ನು ನೀಡಲಾಗಿದೆ ಮತ್ತು ಇಲಾಖೆಯ ಎಲ್ಲಾ ಹಂತದ ಅಧಿಕಾರಿಗಳು ಸದರಿ ಯೋಜನೆಯ ಬಗ್ಗೆ ರೈತರಿಗೆ ಸೂಕ್ತ ಮಾಹಿತಿಯನ್ನು ನೀಡಲು ಕ್ರಮವಹಿಸಲಾಗಿದೆ. |

ಸಂಖ್ಯೆ: ಎನರ್ಜಿ 295 ಇಬಿಎಸ್ 2023

(ಕೆ.ಜೆ.ಜಾರ್ಜ್) 7/12/23
ಇಂಧನ ಸಚಿವರು